# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **1878(2184)** |
| ಮಾನ್ಯ ಸದಸ್ಯರ ಹೆಸರು | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 18.03.2022 |
| ಉತ್ತರಿಸುವ ಸಚಿವರು | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ಜಾತಿಗಳು ನಡೆಸುವ ಶೈಕ್ಷಣಿಕ ಸಂಸ್ಥೆಗಳ ಶಾಲಾ-ಕಾಲೇಜು ಕಟ್ಟಡಗಳ ನಿರ್ಮಾಣಕ್ಕೆ ಸಹಾಯಧನ ನೀಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; | ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ರಾಜ್ಯದಲ್ಲಿ ಹಿಂದುಳಿದ ವರ್ಗಗಳ ವಿವಿಧ ಜಾತಿ/ಜನಾಂಗಗಳ ಸಮುದಾಯ ಚಟುವಟಿಕೆಗಳನ್ನು ಹಾಗೂ ವಿದ್ಯಾರ್ಥಿನಿಲಯಗಳನ್ನು ನಡೆಸಲು ವಿವಿಧ ಹಿಂದುಳಿದ ವರ್ಗಗಳ ಜಾತಿಗಳಿಗೆ ಸೇರಿದ ಸಂಘ-ಸಂಸ್ಥೆಗಳಿಗೆ ಸಮುದಾಯ ಭವನ /ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕೆ ಸರ್ಕಾರದಿಂದ ಅನುದಾನ ಮಂಜೂರು ಅವಕಾಶ ಕಲ್ಪಿಸಲಾಗಿರುತ್ತದೆ.<br>ಆದರೆ, ಹಿಂದುಳಿದ ಜಾತಿಗಳು ನಡೆಸುವ ಶೈಕ್ಷಣಿಕ ಸಂಸ್ಥೆಗಳ ಶಾಲಾ-ಕಾಲೇಜು ಕಟ್ಟಡಗಳ ನಿರ್ಮಾಣಕ್ಕೆ ಸಹಾಯಧನ ನೀಡುವ ಪ್ರಸ್ತಾಪ ಸರ್ಕಾರದ ಮುಂದಿರುವುದಿಲ್ಲ. |
| ಆ) | ಹಾಗಿದ್ದಲ್ಲಿ, 2021-22ನೇ ಸಾಲಿನ ಆಯವ್ಯಯದಲ್ಲಿ ಎಷ್ಟು ಅನುದಾನ ಹಂಚಿಕೆ ಮಾಡಲಾಗಿದೆ ? | ಅನ್ವಯಿಸುವುದಿಲ್ಲ. |
| ಇ) | ಇಲ್ಲದೆ, ಇದ್ದಲ್ಲಿ ಸರ್ಕಾರಕ್ಕೆ ಇರುವ ಸಮಸ್ಯೆಗಳು ಯಾವುವು; | ಹೊಸ ಯೋಜನೆಗಳು ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನ್ನು ಅವಲಂಬಿಸಿರುತ್ತದೆ. ಪ್ರಸ್ತುತ ಹಿಂದುಳಿದ ಜಾತಿಗಳ ಶೈಕ್ಷಣಿಕ ಸಂಸ್ಥೆಗಳಿಗೆ ಶಾಲಾ-ಕಾಲೇಜು ಕಟ್ಟಡಗಳ ನಿರ್ಮಾಣಕ್ಕೆ ಸಹಾಯಧನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಈ) | ಹಿಂದುಳಿದ ಜಾತಿಗಳ ಶೈಕ್ಷಣಿಕ ಸಂಸ್ಥೆಗಳಿಗೆ ಸಹಾಯಧನ ನೀಡಿದ್ದಲ್ಲಿ, ಗುಣಮಟ್ಟದ ಶಿಕ್ಷಣವನ್ನು ನೀಡಲು ಸಹಾಯಕವಾಗುವುದಲ್ಲವೇ? (ವಿವರ ನೀಡುವುದು) | |

**ಸಂಖ್ಯೆ: ಹಿಂವಕ 224 ಬಿಎಂಎಸ್ 2022**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು